# ಉಪ ತಹಶೀಲ್ದಾರರು, ನಾಡ ಕಾರ್ಯಾಲಯ, ಹಿರೇಹಡಗಲಿಯಲ್ಲಿ

| ಅರ್ಜಿದಾರರು | ತಕರಾರುದಾರರು |
|---|---|
| 1)ವೀರಣ್ಣ ಮರಿತಮ್ಮನಗೌಡ್ರ ತಂದೆ ಗುರುಪಾದಗೌಡ<br>ಬೂದನೂರು ಗ್ರಾಮ, ಹಡಗಲಿ ತಾ.<br>2)ಅರುಣ ನಾರಾಯಣಿ ತಂದೆ ಶಿವನಾಗಪ್ಪ,<br>ಹೊಳಲು ಗ್ರಾಮ, ಹಡಗಲಿ ತಾ. | ಕೊಟ್ರೇಶ್ ಮರಿತಮ್ಮನಗೌಡ,<br>ಬೂದನೂರು ಗ್ರಾಮ, ಹಡಗಲಿ ತಾ. |

ವಿವಾದಿತ ಜಮೀನಿನ ವಿವರ:–

| ಕ್ರ.ಸಂ. | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ | ತರಹೆ |
|---|---|---|---|---|
| 1. | ಬೂದನೂರು | 157/ಬಿ/4 | 1–25 | ಖುಷ್ಕಿ |
| 2. | ,, | 157/ಸಿ/3 | 2–33 | ,, |

*****

**ಪೀಠಿಕೆ:–**

ಬಳ್ಳಾರಿ ಜಿಲ್ಲೆ ಹೂವಿನಹಡಗಲಿ ತಾಲೂಕಿನ ಬೂದನೂರು ಗ್ರಾಮದ ಮೇಲ್ಕಂಡ ಜಮೀನಿಗೆ ಸಂಬಂಧಿಸಿದಂತೆ, ಬೂದನೂರು ಗ್ರಾಮದ ನಿವಾಸಿಯಾದ ವೀರಣ್ಣ ಮರಿತಮ್ಮನಗೌಡ್ರ ತಂದೆ ಗುರುಪಾದಗೌಡ ಇವರು ಹೊಳಲು ಗ್ರಾಮದ ಅರುಣ ನಾರಾಯಣಿ ತಂದೆ ಶಿವನಾಗಪ್ಪ ಇವರಿಗೆ ನೋಂದಾಯಿತ ಕ್ರಯ ದಸ್ತಾವೇಜು ಸಂ.470/14–15 ದಿ:12–05–2014 ರಂದು ರೂ.3,00,000/–ಕ್ಕೆ ಕ್ರಯಕ್ಕೆ ನೀಡಿರುತ್ತಾರೆ ಎಂದು ಉಪನೋಂದಣಾಧಿಕಾರಿಗಳು, ಹಡಗಲಿ ರವರು ವರದಿ ನೀಡಿರುತ್ತಾರೆ. ಗ್ರಾಮದಲ್ಲಿ ನಮೂನೆ–21 ರ ನೋಟೀಸು ದಿನಾಂಕ 21–05–2014 ಜಾರಿ ಮಾಡಲಾಗಿ, ನಿಗದಿತ ಅವಧಿಯೊಳಗೆ ಅಂದರೆ ದಿನಾಂಕ 03–06–2014 ರಂದು ಬೂದನೂರು ಗ್ರಾಮದ ಕೊಟ್ರೇಶ್ ಮರಿತಮ್ಮನಗೌಡ ರವರು ತಕರಾರು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಕಾರಣ ಎಂ.ಆರ್.ನಂ.49/2013–14 ರ ಕಡತವು ತಕರಾರು ಕಡತವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಹಿರೇಹಡಗಲಿ ರವರು ಈ ಕಾರ್ಯಾಲಯಕ್ಕೆ ವರದಿ ಮಾಡಿರುತ್ತಾರೆ. ಉಭಯ ಪಕ್ಷದವರಿಗೆ ಕೇಳಿಕೊಳ್ಳುವ ಅವಕಾಶ ನೀಡಿ ದಿ:04–09–2014 ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸ್ ನೀಡಲಾಯಿತು.

ಪ್ರಕರಣದ ವಿಚಾರಣೆಗೆ ಅರ್ಜಿದಾರರು ಮತ್ತು ತಕರಾರುದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಹಾಜರಾಗಿ ಪ್ರಕರಣ ಸಂಖ್ಯೆ ಓ.ಎಸ್.ನಂ.28/2014 ಪ್ರಕರಣವು ಸಿವಿಲ್ ನ್ಯಾಯಾಲಯದಲ್ಲಿ ಬಾಕಿ ಇರುವುದರಿಂದ ಪ್ರಕರಣವನ್ನು ಮುಕ್ತಾಯಗೊಳಿಸಲು ಕೋರಿರುತ್ತಾರೆ. ಆದ್ದರಿಂದ ಈ ಕೆಳಕಂಡಂತೆ ಆದೇಶ.

ಸಂ/ಕಂ/ಪಹಣಿ/ವಿವಾದ/17/2014–15 ದಿನಾಂಕ:17–10–2016.

## ಆದೇಶ

ಪೀಠಿಕೆಯಲ್ಲಿ ವಿವರಿಸಿದ ಅಂಶಗಳು ಹಾಗೂ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 128 ಮತ್ತು 129 ರ ಪ್ರಕಾರ ಎಂ.ಆರ್.ನಂ.49/2013–14 ರ ಪ್ರಕರಣದಲ್ಲಿ ಯಥಾಸ್ಥಿತಿ ಕಾಯ್ದುಕೊಳ್ಳಲು ಆದೇಶಿಸಿದೆ. ಉಭಯರು ತಮ್ಮ ಹಕ್ಕನ್ನು ಮಾನ್ಯ ಸಿವಿಲ್ ನ್ಯಾಯಾಲಯದಲ್ಲಿ ಸ್ಥಾಪಿಸಿಕೊಂಡು ಪರಿಹಾರ ಕಂಡುಕೊಳ್ಳಲು ಆದೇಶಿಸಿದೆ.

ಉಪ ತಹಶೀಲ್ದಾರರು
ನಾಡ ಕಾರ್ಯಾಲಯ
ಹಿರೇಹಡಗಲಿ

ಉಪ ತಹಶೀಲ್ದಾರರು
ನಾಡ ಕಾರ್ಯಾಲಯ
ಹಿರೇಹಡಗಲಿ

ಪ್ರತಿಯನ್ನು

1. ವಾದಿ ಮತ್ತು ಪ್ರತಿವಾದಿಗಳಿಗೆ
2. ಭೂಮಿ ಕೇಂದ್ರ, ತಾಲೂಕು ಕಛೇರಿ, ಹೂವಿನಹಡಗಲಿ ಇವರಿಗೆ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
3. ಕಛೇರಿ ಕಡತಕ್ಕೆ ಶುದ್ಧಪ್ರತಿ.